Akashvani : Bangalore
Regional Bulletin In Kannada
ಆಕಾಶವಾಣಿ ಬೆಂಗಳೂರು

ಪ್ರದೇಶ ಸಮಾಚಾರ

26.01.2026 18.40hrs

*****************

ಮುಖ್ಯಾಂಶಗಳು

- ರಾಜ್ಯಾದ್ಯಂತ ಸಂಭ್ರಮದ ೭೭ನೇ ಗಣರಾಜ್ಯೋತ್ಸವ ದಿನಾಚರಣೆ; ಜಿಲ್ಲಾ, ತಾಲೂಕು ಕೇಂದ್ರಗಳಲ್ಲಿ ಪಥಸಂಚಲನ
- ರಾಜ್ಯದಲ್ಲಿ ಮುಂದಿನ ನಾಲ್ಕು ವರ್ಷಗಳಲ್ಲಿ ೪೪೦ ಹೊಸ ವಿದ್ಯುತ್ ಉಪ ಕೇಂದ್ರಗಳ ಸ್ಥಾಪನೆ - ಇಂಧನ ಸಚಿವ ಕೆ.ಜೆ ಜಾರ್ಜ್
- ಅಪ್ರತಿಮ ದೇಶಪ್ರೇಮಿ, ಕ್ರಾಂತಿವೀರ ಸಂಗೊಳ್ಳಿ ರಾಯಣ್ಣ ಪುಣ್ಯಸ್ಮರಣೆ: ಗಣ್ಯರಿಂದ ಗೌರವ ನಮನ
- ಕಾಂಗ್ರೆಸ್‌ನಿಂದ ನಾಳೆ ರಾಜಭವನ ಚಲೋ: ವಿವಿಧ ತಾಲೂಕುಗಳಲ್ಲಿ ಪಾದಯಾತ್ರೆ ಆಯೋಜನೆ

*****************

ರಾಜ್ಯಾದ್ಯಂತ ಇಂದು ೭೭ನೇ ಗಣರಾಜ್ಯೋತ್ಸವ ದಿನಾಚರಣೆಯನ್ನು ಸಂಭ್ರಮದಿಂದ ಆಚರಿಸಲಾಯಿತು.

ಗ್ರೇಟರ್ ಬೆಂಗಳೂರು ಪ್ರಾಧಿಕಾರ ವ್ಯಾಪ್ತಿಯ ಕೇಂದ್ರ ನಗರ ಪಾಲಿಕೆಯಲ್ಲಿ ಇಂದು ಅಯೋಜಿಸಲಾಗಿದ್ದ ಗಣರಾಜ್ಯೋತ್ಸವ ಸಮಾರಂಭದಲ್ಲಿ ಬೆಂಗಳೂರು ಕೇಂದ್ರ ನಗರ ಪಾಲಿಕೆಯ ಮಾನ್ಯ ಆಯುಕ್ತ ಪಿ.ರಾಜೇಂದ್ರ ಚೋಳನ್ ಅವರು ಧ್ವಜಾರೋಹಣ ನೆರವೇರಿಸಿದರು.

ಬೆಳಗಾವಿಯಲ್ಲಿ ಜಿಲ್ಲಾ ಕ್ರೀಡಾಂಗಣದಲ್ಲಿ ಉಸ್ತುವಾರಿ ಸಚಿವ ಸತೀಶ್ ಜಾರಕಿಹೊಳಿ ಧ್ವಜಾರೋಹಣ ನೆರವೇರಿಸಿ, ವಿವಿಧ ಪಡೆಗಳಿಂದ ಗೌರವ ವಂದನೆ ಸ್ವೀಕರಿಸಿದರು.

ಸಾಂಸ್ಕೃತಿಕ ನಗರಿ ಮೈಸೂರಿನ ಬನ್ನಿಮಂಟಪದ ಪಂಜಿನ ಕವಾಯತು ಮೈದಾನದಲ್ಲಿ ಜಿಲ್ಲಾ ಉಸ್ತುವಾರಿ ಸಚಿವ ಎಚ್.ಸಿ.ಮಹದೇವಪ್ಪ, ಧ್ವಜಾರೋಹಣ ನೆರವೇರಿಸಿದರು.

ಗದಗ ನಗರದ ಕೆ.ಎಚ್.ಪಾಟೀಲ ಕ್ರೀಡಾಂಗಣದಲ್ಲಿ ಆಯೋಜಿಸಿದ್ದ ಗಣರಾಜ್ಯೋತ್ಸವ ಕಾರ್ಯಕ್ರಮದಲ್ಲಿ ಜಿಲ್ಲಾ ಉಸ್ತುವಾರಿ ಸಚಿವ ಎಚ್.ಕೆ.ಪಾಟೀಲ್ ಭಾಗವಹಿಸಿದ್ದರು.

ವಿಜಯಪುರದಲ್ಲಿ ಜಿಲ್ಲಾ ಉಸ್ತುವಾರಿ ಸಚಿವ ಡಾ.ಎಂ.ಬಿ.ಪಾಟೀಲ ರಾಷ್ಟ್ರಧ್ವಜಾರೋಹಣ ನೆರವೇರಿಸಿ, ನಂತರ ಧ್ವಜವಂದನೆ ಸ್ವೀಕರಿಸಿದರು. ಅರ್ಜುನ ಭಜಂತ್ರಿ ನೇತೃತ್ವದ ಪೊಲೀಸ್ ವಾದ್ಯ ವೃಂದ ಅತ್ಯಾಕರ್ಷಕ ಪಥಸಂಚಲನ ನಡೆಸಿ ನೋಡುಗರ ಮನಸೂರೆಗೊಂಡಿತು.

ಬೆಂಗಳೂರು ಗ್ರಾಮಾಂತರ ಜಿಲ್ಲಾಮಟ್ಟದ ಗಣರಾಜ್ಯೋತ್ಸವ ಸಮಾರಂಭದಲ್ಲಿ ಸಚಿವ ಕೆ.ಹೆಚ್.ಮುನಿಯಪ್ಪ ಧ್ವಜಾರೋಹಣ ನೆರವೇರಿಸಿದರು.

ಚಿಕ್ಕಬಳ್ಳಾಪುರ ಜಿಲ್ಲಾ ಸರ್.ಎಂ.ವಿ.ಕ್ರೀಡಾಂಗಣದಲ್ಲಿ ಜಿಲ್ಲಾಡಳಿತ ಆಯೋಜಿಸಿದ್ದ ಗಣರಾಜ್ಯೋತ್ಸವ ಸಮಾರಂಭದಲ್ಲಿ ಉನ್ನತ ಶಿಕ್ಷಣ ಸಚಿವ ಡಾ.ಎಂ.ಸಿ.ಸುಧಾಕರ್ ಧ್ವಜಾರೋಹಣ ನೆರವೇರಿಸಿದರು.

ಧಾರವಾಡ ಜಿಲ್ಲಾಡಳಿತವು ಆರ್.ಎನ್.ಶೆಟ್ಟಿ ಜಿಲ್ಲಾ ಕ್ರೀಡಾಂಗಣದಲ್ಲಿ ಆಯೋಜಿಸಿದ್ದ ಗಣರಾಜ್ಯೋತ್ಸವದಲ್ಲಿ ಸಚಿವ ಸಂತೋಷ ಎಸ್. ಲಾಡ್ ಭಾಗವಹಿಸಿದ್ದರು.

ಚಾಮರಾಜನಗರ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್ ಹಾಗೂ ತೋಟಗಾರಿಕೆ ಇಲಾಖೆ ವತಿಯಿಂದ ಇಂದಿನಿಂದ ೨೮ರವರೆಗೆ ಮೂರು ದಿನಗಳ ಕಾಲ ನಗರದ ಜಿಲ್ಲಾಡಳಿತ ಭವನದ ಆವರಣದಲ್ಲಿ ಏರ್ಪಡಿಸಿರುವ ಫಲಪುಷ್ಪ ಪ್ರದರ್ಶನಕ್ಕೆ ಜಿಲ್ಲಾ ಉಸ್ತುವಾರಿ ಸಚಿವ ಕೆ.ವೆಂಕಟೇಶ್ ಚಾಲನೆ ನೀಡಿದರು.

ರಾಮನಗರದಲ್ಲಿ ಜಿಲ್ಲಾ ಉಸ್ತುವಾರಿ ಸಚಿವ ರಾಮಲಿಂಗಾರೆಡ್ಡಿ ಅವರು ರಾಷ್ಟ್ರ ಧ್ವಜಾರೋಹಣ ನೆರವೇರಿಸಿ, ಪಥಸಂಚಲನ, ಸಾಂಸ್ಕೃತಿಕ ಕಾರ್ಯಕ್ರಮದಲ್ಲಿ ವಿಜೇತರಾದವರಿಗೆ ಪ್ರಶಸ್ತಿ ಪತ್ರ ಹಾಗೂ ಬಹುಮಾನ ವಿತರಿಸಿದರು.

ಮಡಿಕೇರಿಯ ಜನರಲ್ ತಿಮ್ಮಯ್ಯ ಜಿಲ್ಲಾ ಕ್ರೀಡಾಂಗಣದಲ್ಲಿ ಆಯೋಜಿಸಿದ್ದ ಗಣರಾಜ್ಯೋತ್ಸವ ಸಮಾರಂಭದಲ್ಲಿ ಸಚಿವ ಎನ್.ಎಸ್. ಬೋಸರಾಜು ಭಾಗವಹಿಸಿದ್ದರು.

ಉಡುಪಿಯ ಸೇಂಟ್ ಮೇರೀಸ್ ಐಲ್ಯಾಂಡ್‌ನಲ್ಲಿಂದು ಗಣರಾಜ್ಯೋತ್ಸವ ಸಮಾರಂಭದಲ್ಲಿ ಭಾಗವಹಿಸಿ ಮಾತನಾಡಿದ ಸಚಿವೆ ಲಕ್ಷ್ಮೀ ಹೆಬ್ಬಾಳಕರ್, ಸಂಪೂರ್ಣ ಕರಾವಳಿ ಭಾಗದಲ್ಲಿ ಹೊಸ ದೃಷ್ಟಿಕೋನದಿಂದ ಪ್ರವಾಸೋದ್ಯಮ ಬೆಳವಣಿಗೆಗೆ ಅಗತ್ಯ ನೆರವು ನೀಡಲಾಗುವುದು ಎಂದು ತಿಳಿಸಿದ್ದಾರೆ.

ಹಾವೇರಿಯ ಹೊಸಮನಿ ಸಿದ್ದಪ್ಪ ಜಿಲ್ಲಾ ಕ್ರೀಡಾಂಗಣದಲ್ಲಿಂದು ಜಿಲ್ಲಾ ಉಸ್ತುವಾರಿ ಸಚಿವ ಶಿವಾನಂದ ಪಾಟೀಲ ಗಣರಾಜ್ಯೋತ್ಸವದ ಧ್ವಜಾರೋಹಣ ನೆರವೇರಿಸಿದರು.

ನೈಋುತ್ಯ ರೈಲ್ವೆಯ ವತಿಯಿಂದ ೭೭ನೇ ಗಣರಾಜ್ಯೋತ್ಸವವನ್ನು ಹುಬ್ಬಳ್ಳಿಯ ರೈಲ್ವೇ ಸ್ಪೋರ್ಟ್ಸ್ ಮೈದಾನದಲ್ಲಿ ನೈಋುತ್ಯ ರೈಲ್ವೆಯ ಪ್ರಧಾನ ವ್ಯವಸ್ಥಾಪಕ ಮುಕುಲ್ ಸರನ್ ಮಾಥುರ್ ಧ್ವಜಾರೋಹಣ ನೆರವೇರಿಸಿ, ಗೌರವ ವಂದನೆ ಸ್ವೀಕರಿಸಿದರು.

ಯಾದಗಿರಿಯ ಜಿಲ್ಲಾ ಕ್ರೀಡಾಂಗಣದಲ್ಲಿ ನಡೆದ ಗಣರಾಜ್ಯೋತ್ಸವ ಸಮಾರಂಭದಲ್ಲಿ ಜಿಲ್ಲಾ ಉಸ್ತುವಾರಿ ಸಚಿವ ಶರಣಬಸಪ್ಪ ದರ್ಶನಾಪುರ ಭಾಗವಹಿಸಿದ್ದರು.

ಬಾಗಲಕೋಟೆ ಜಿಲ್ಲಾ ಕ್ರೀಡಾಂಗಣದಲ್ಲಿ ಆಯೋಜಿಸಲಾಗಿದ್ದ ಸಮಾರಂಭದಲ್ಲಿ ಸಚಿವ ಆರ್.ಬಿ. ತಿಮ್ಮಾಪೂರ ಅವರು ರಾಷ್ಟ್ರಧ್ವಜಾರೋಹಣ ನೆರವೇರಿಸಿದರು.

****************

ಇಂಧನ ಇಲಾಖೆಯಿಂದ ರಾಜ್ಯದಲ್ಲಿ ಮುಂದಿನ ೪ ವರ್ಷಗಳಲ್ಲಿ ಒಟ್ಟು ೪೪೦ ಹೊಸ ವಿದ್ಯುತ್ ಉಪ ಕೇಂದ್ರಗಳ ಸ್ಥಾಪನೆಯ ಗುರಿ ಹೊಂದಲಾಗಿದೆ ಎಂದು ಇಂಧನ ಸಚಿವ ಕೆ.ಜೆ ಜಾರ್ಜ್ ತಿಳಿಸಿದ್ದಾರೆ.

ಚಿಕ್ಕಮಗಳೂರಿನಲ್ಲಿಂದು ಸರ್ಕಾರದ ವಿವಿಧ ಕಾರ್ಯಕ್ರಮಗಳಿಗೆ ಚಾಲನೆ ನೀಡಿದ ಬಳಿಕ ಮಾತನಾಡಿದ ಅವರು, ಈಗಾಗಲೇ ರಾಜ್ಯದ ಹಲವೆಡೆ ವಿದ್ಯುತ್ ಉಪ ಕೇಂದ್ರಗಳ ಸ್ಥಾಪನೆಗೆ ಚಾಲನೆ ನೀಡಲಾಗಿದೆ. ಚಿಕ್ಕಮಗಳೂರು ಜಿಲ್ಲೆಯಲ್ಲಿ ಕೂಡ ಈ ಕಾರ್ಯ ಪ್ರಗತಿಯಲ್ಲಿದೆ. ಜಿಲ್ಲೆಯ ಕಡೂರು ತಾಲೂಕು ಚೌಳಹಿರಿಯೂರು, ಕೆ.ಬಸವನಹಳ್ಳಿಯಲ್ಲಿ ನೂತನ ವಿದ್ಯುತ್ ಉಪ ಕೇಂದ್ರ ಸ್ಥಾಪನೆಗೆ ಆದೇಶ ನೀಡಲಾಗಿದೆ ಎಂದರು.

ಜಿಲ್ಲೆಯಲ್ಲಿನ ಹಾಲಿ ವಿದ್ಯುತ್ ಉಪ ಕೇಂದ್ರಗಳಲ್ಲಿ ಸುಮಾರು ೮೦ ಕೋಟಿ ರೂಪಾಯಿ ವೆಚ್ಚದಲ್ಲಿ ಪರಿವರ್ತಕಗಳ ಸಾಮರ್ಥ್ಯ ಹೆಚ್ಚಿಸಲು ಕ್ರಮಕೈಗೊಳ್ಳಲಾಗಿದೆ ಎಂದು ಸಚಿವರು ಮಾಹಿತಿ ನೀಡಿದರು.

****************

ಬ್ರಿಟಿಷರ ವಿರುದ್ಧ ವೀರಾವೇಶದಿಂದ ಹೋರಾಡಿದ ಅಪ್ರತಿಮ ದೇಶಪ್ರೇಮಿ, ಕ್ರಾಂತಿವೀರ ಸಂಗೊಳ್ಳಿ ರಾಯಣ್ಣ ಅವರ ಪುಣ್ಯಸ್ಮರಣೆಯ ಅಂಗವಾಗಿ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಇಂದು ಬೆಂಗಳೂರು ನಗರದ ಮೆಜೆಸ್ಟಿಕ್ ರೈಲು ನಿಲ್ದಾಣದ ಸಮೀಪವಿರುವ ರಾಯಣ್ಣನವರ ಪುತ್ಥಳಿಗೆ ಪುಷ್ಪನಮನ ಸಲ್ಲಿಸಿದರು.

ಇನ್ನೊಂದೆಡೆ, ಬ್ರಿಟೀಷರ ವಿರುದ್ಧ ವೀರಾವೇಶದಿಂದ ಹೋರಾಡಿದ ಅಪ್ರತಿಮ ದೇಶಪ್ರೇಮಿ, ಕ್ರಾಂತಿವೀರ ಸಂಗೊಳ್ಳಿ ರಾಯಣ್ಣನವರ ಪುಣ್ಯಸ್ಮರಣೆಯಂದು ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಗೌರವ ನಮನ ಸಲ್ಲಿಸಿದ್ದಾರೆ.

ದೇಹದ ನರ-ನಾಡಿಗಳಲ್ಲಿ ದೇಶಪ್ರೇಮವನ್ನೇ ತುಂಬಿಕೊಂಡಿದ್ದ ಸಂಗೊಳ್ಳಿರಾಯಣ್ಣನ ತ್ಯಾಗ ಮತ್ತು ಬಲಿದಾನದ ಇತಿಹಾಸವು ಇಂದಿನ ಯುವ ಪೀಳಿಗೆಗೆ ಸದಾ ಆದರ್ಶಪ್ರಾಯ ಎಂದು ಸಾಮಾಜಿಕ ಮಾಧ್ಯಮದಲ್ಲಿ ಹೇಳಿದ್ದಾರೆ.

*****************

ನರೇಗಾ ಉಳಿಸುವ ಸಲುವಾಗಿ ನಾಳೆ ರಾಜಭವನ ಚಲೋ ನಡೆಸಲಾಗುವುದು. ಪ್ರತಿ ತಾಲೂಕಿನಲ್ಲೂ ಕನಿಷ್ಠ ಐದು ಕಿಲೋಮೀಟರ್ ಪಾದಯಾತ್ರೆ ನಡೆಸಲಾಗುವುದು. ಪ್ರತಿ ಪಂಚಾಯಿತಿ ಮಟ್ಟದಲ್ಲೂ ಹೋರಾಟ ಹಮ್ಮಿಕೊಳ್ಳಲಾಗುವುದು ಎಂದು ಕೆಪಿಸಿಸಿ ಅಧ್ಯಕ್ಷ ಹಾಗೂ ಉಪ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ತಿಳಿಸಿದ್ದಾರೆ.

ಸುದ್ದಿಗಾರರೊಂದಿಗೆ ಮತನಾಡಿದ ಅವರು, ಮಹಾತ್ಮಗಾಂಧಿ ಅವರ ಹೆಸರಿನಲ್ಲಿ ಆರಂಭವಾದ ಯೋಜನೆ, ಗ್ರಾಮೀಣ ಭಾಗದ ಜನರ ಉದ್ಯೋಗದ ಹಕ್ಕಿಗೆ ಖಾತ್ರಿ ನೀಡಿತ್ತು. ಆದರೆ, ಈ ಹಕ್ಕು ಈಗ ಮೊಟಕಾಗಿದೆ ಎಂದು ಆರೋಪಿಸಿದ ಅವರು, ದೇಶದ ಉದ್ದಗಲಕ್ಕೂ ಹೋರಾಟ ರೂಪಿಸಲಾಗಿದೆ ಎಂದು ಹೇಳಿದರು.

*****************

ಮಂಡ್ಯ ಜಿಲ್ಲೆಯ ಪಾಂಡವಪುರದ ಪುಸ್ತಕ ಪ್ರೇಮಿ ಅಂಕೇಗೌಡ ಅವರು ಪ್ರಸಕ್ತ ಸಾಲಿನ ಪದ್ಮಶ್ರೀ ಪ್ರಶಸ್ತಿಗೆ ಭಾಜನರಾಗಿದ್ದಾರೆ.

೧೦ ಲಕ್ಷಕ್ಕೂ ಹೆಚ್ಚು ಪುಸ್ತಕಗಳನ್ನು ಸಂಗ್ರಹಿಸುವ ಮೂಲಕ ‘ಪುಸ್ತಕ ಮನೆ ಅಂಕೇಗೌಡ’ ಎಂದೇ ಖ್ಯಾತರಾಗಿದ್ದಾರೆ.

ತಮ್ಮ ದುಡಿಮೆಯ ಮೂಲಕ ಸಂಪಾದಿಸಿದ ಹಣವನ್ನು ಪುಸ್ತಕ ಸಂಗ್ರಹಕ್ಕೆ ವ್ಯಹಿಸಿದ್ದಾರೆ. ಕನ್ನಡ, ಹಿಂದಿ, ಇಂಗ್ಲೀಷ್ ಸೇರಿದಂತೆ ದೇಶದ ನಾನಾ ಭಾಷೆಗಳ ಪುಸ್ತಕಗಳನ್ನು ಸಂಗ್ರಹಿಸಿ, ಬೃಹತ್ ಗ್ರಾಂಥಾಲಯವನ್ನು ಪಾಂಡವಪುರದಲ್ಲಿ ನಿರ್ಮಿಸುವ ಮೂಲಕ ಎಲ್ಲರಿಗೂ ಮಾದರಿಯಾಗಿದ್ದಾರೆ.

ಇವರ ಗ್ರಂಥಾಲಯಗಳಲ್ಲಿ ಸಾಹಿತ್ಯ ಪರಂಪರೆಯನ್ನು ಶ್ರೀಮಂತಗೊಳಿಸಿದ ಬಹು ಅಪರೂಪದ ಸಾವಿರಾರು ಪುಸ್ತಕಗಳು ಓದಲು ಲಭ್ಯವಿದೆ. ಇದರ ಜೊತೆಗೆ ಬೇರೆ ಬೇರೆ ಕಾಲಘಟ್ಟದ ಅಪರೂಪದ ನಾಣ್ಯಗಳು, ಅಂಚೆ ಚೀಟಿಗಳು ಈ ಗ್ರಂಥಾಲಯದಲ್ಲಿ ಕಾಣಸಿಗಲಿವೆ.

ಪದ್ಮಶ್ರೀ ಪ್ರಶಸ್ತಿ ಭಾಜನರಾಗಿರುವ ಅಂಕೇಗೌಡರು ಆಕಾಶವಾಣಿಯೊಂದಿಗೆ ತಮ್ಮ ಸಂತಸ ಹಂಚಿಕೊಂಡಿದ್ದಾರೆ.

ಧ್ವನಿ: ಅಂಕೇಗೌಡರು

*****************

ಕೆ.ಎಲ್.ಇ. ಸಂಸ್ಥೆಯ ಕಾರ್ಯಾಧ್ಯಕ್ಷರಾಗಿ ಸಾಮಾಜಿಕ ಸೇವೆಯಲ್ಲಿ ಡಾಕ್ಟರ್ ಪ್ರಭಾಕರ ಕೋರೆ ಅವರು, ನಿರಂತರವಾಗಿ ತೊಡಗಿಸಿಕೊಂಡಿದ್ದು, ಶೈಕ್ಷಣಿಕ ಹಾಗೂ ಆರೋಗ್ಯ ಕ್ಷೇತ್ರದಲ್ಲಿ ಅವರ ಗಣನೀಯ ಸಾಧನೆ ಗುರುತಿಸಿ, ಕೇಂದ್ರ ಸರ್ಕಾರ ಪದ್ಮಶ್ರೀ ಪ್ರಶಸ್ತಿ ಘೋಷಿಸಿದೆ.

ಈ ಹಿನ್ನೆಲೆಯಲ್ಲಿ ಬೆಳಗಾವಿ ಜಿಲ್ಲಾ ಕ್ರೀಡಾಂಗಣದಲ್ಲಿ ಇಂದು ಜರುಗಿದ ಗಣರಾಜ್ಯೋತ್ಸವ ಸಂದರ್ಭದಲ್ಲಿ ಜಿಲ್ಲಾ ಉಸ್ತುವಾರಿ ಸಚಿವ ಸತೀಶ್ ಜಾರಕಿಹೊಳಿ ಅವರು ಜಿಲ್ಲಾ ಆಡಳಿತದ ವತಿಯಿಂದ ಅವರನ್ನು ಸನ್ಮಾನಿಸಿದರು.

ಆಕಾಶವಾಣಿಯೊಂದಿಗೆ ಮಾತನಾಡಿದ ಡಾಕ್ಟರ್ ಪ್ರಭಾಕರ ಕೋರೆ, ಕಳೆದ ೪೨ ವರ್ಷಗಳಿಂದ ಕೆ.ಎಲ್.ಇ. ಸಂಸ್ಥೆಯ ಕಾರ್ಯಾಧ್ಯಕ್ಷರಾಗಿ ಶಿಕ್ಷಣ ಮತ್ತು ಆರೋಗ್ಯ ಕ್ಷೇತ್ರದಲ್ಲಿ ಸೇವೆ ಸಲ್ಲಿಸಿದಕ್ಕೆ ಕೇಂದ್ರ ಸರ್ಕಾರ ಪದ್ಮಶ್ರೀ ಪ್ರಶಸ್ತಿ ಘೋಷಣೆ ಮಾಡಿರುವುದು ಸಂತಸ ತಂದಿದೆ. ನಿರಂತರ ಸೇವೆ ವೈಯಕ್ತಿಕವಾಗಿ ಸಂತೃಪ್ತಿ ನೀಡಿದೆ. ಮುಂಬರುವ ದಿನಗಳಲ್ಲಿ ಇನ್ನಷ್ಟು ಶಾಲಾ-ಕಾಲೇಜುಗಳನ್ನು ಪ್ರಾರಂಭಿಸುವ ಉದ್ದೇಶವಿದೆ ಎಂದು ತಿಳಿಸಿದ್ದಾರೆ.

ಧ್ವನಿ: ಪ್ರಭಾಕರ ಕೋರೆ

*****************

ರೈತರು ಹಾಗೂ ತೋಟಗಾರಿಕೆ ಆಸಕ್ತರಿಗೆ ಪಲಪುಷ್ಪ ಪ್ರದರ್ಶನಗಳು ಹೆಚ್ಚು ಸ್ಫೂರ್ತಿದಾಯಕವಾಗಿವೆ ಎಂದು ನಗರಾಭಿವೃದ್ಧಿ ಸಚಿವ ಬಿ.ಎಸ್.ಸುರೇಶ್ ಹೇಳಿದ್ದಾರೆ.

ಕೋಲಾರ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್ ಹಾಗೂ ತೋಟಗಾರಿಕೆ ಇಲಾಖೆಯ ಸಂಯುಕ್ತಾಶ್ರಯದಲ್ಲಿ ನಗರದ ಹಳೇ ಜಿಲ್ಲಾಧಿಕಾರಿಗಳ ಕಚೇರಿ ಆವರಣದಲ್ಲಿ ಆಯೋಜಿಸಲಾಗಿರುವ ಮೂರು ದಿನಗಳ ‘ಜಿಲ್ಲಾ ಮಟ್ಟದ ಫಲಪುಷ್ಪ ಪ್ರದರ್ಶನ’ಕ್ಕೆ ಚಾಲನೆ ನೀಡಿ ಅವರು ಮಾತನಾಡಿದರು.

********ಮುಕ್ತಾಯ*********